# <u>ಕರ್ನಾಟಕ ವಿಧಾನ ಪರಿಷತ್ತು</u>

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 23 (51) |
| ವಿಧಾನ ಪರಿಷತ್ತಿನ ಸದಸ್ಯರು | : | ಶ್ರೀ ಟಿ.ಎ. ಶರವಣ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |
| ಉತ್ತರಿಸುವ ದಿನಾಂಕ | : | 04.07.2023 |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಕೈಗಾರಿಕೆ ಸ್ಥಾಪನೆಯ ಅನುಮತಿಗೆ ಪ್ರಸ್ತುತ ಯಾವ ಮಾದರಿ ಮತ್ತು ವಿಧಾನಗಳನ್ನು ಅನುಸರಿಸಲಾಗುತ್ತಿದೆ; (ವಿವರ ನೀಡುವುದು) | ರಾಜ್ಯದಲ್ಲಿ ಬಂಡವಾಳ ಹೂಡಿಕೆ ಪ್ರಸ್ತಾವನೆಗಳಿಗೆ ಅನುಮೋದನೆ ನೀಡಲು ಕರ್ನಾಟಕ ಕೈಗಾರಿಕೆಗಳ (ಸೌಲಭ್ಯ) ಅಧಿನಿಯಮ, 2002ರ ಹಾಗೂ ಕರ್ನಾಟಕ ಕೈಗಾರಿಕೆಗಳ (ಸೌಲಭ್ಯ) (ತಿದ್ದುಪಡಿ) ಅಧಿನಿಯಮ, 2015 ರ ಪ್ರಕಾರ ಬಂಡವಾಳ ಗಾತ್ರದ ಆಧಾರದ ಮೇಲೆ ಕೆಳಕಂಡ 3 ಸಮಿತಿಗಳನ್ನು ರಚಿಸಲಾಗಿದೆ.<br><br>**<u>ಜಿಲ್ಲಾ ಮಟ್ಟದ ಏಕಗವಾಕ್ಷಿ ಒಪ್ಪಿಗೆ ನೀಡಿಕೆ ಸಮಿತಿ</u>** (DLSWCC): ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರೂ.15.00 ಕೋಟಿವರೆಗಿನ ಬಂಡವಾಳ ಹೂಡಿಕೆ ಪ್ರಸ್ತಾವನೆಗಳಿಗೆ ಜಿಲ್ಲಾ ಮಟ್ಟದ ಏಕಗವಾಕ್ಷಿ ಒಪ್ಪಿಗೆ ನೀಡಿಕೆ ಸಮಿತಿ ಸಭೆಯಲ್ಲಿ ಅನುಮೋದನೆಯನ್ನು ನೀಡಲಾಗುವುದು.<br><br>**<u>ರಾಜ್ಯ ಮಟ್ಟದ ಏಕಗವಾಕ್ಷಿ ಒಪ್ಪಿಗೆ ನೀಡಿಕೆ ಸಮಿತಿ</u>** (SLSWCC): ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರ ಅಧ್ಯಕ್ಷತೆಯಲ್ಲಿ ರೂ. 15.00 ಕೋಟಿಯಿಂದ ರೂ.500 ಕೋಟಿವರೆಗಿನ ಬಂಡವಾಳ ಹೂಡಿಕೆ ಪ್ರಸ್ತಾವನೆಗಳಿಗೆ ರಾಜ್ಯ ಮಟ್ಟದ ಏಕಗವಾಕ್ಷಿ ಒಪ್ಪಿಗೆ ನೀಡಿಕೆ ಸಮಿತಿ ಸಭೆಯಲ್ಲಿ ಅನುಮೋದನೆಯನ್ನು ನೀಡಲಾಗುವುದು.<br><br>**<u>ರಾಜ್ಯ ಉನ್ನತ ಮಟ್ಟದ ಒಪ್ಪಿಗೆ ನೀಡಿಕೆ ಸಮಿತಿ</u>** (SHLCC): ಸನ್ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ರೂ.500 ಕೋಟಿ ಮೇಲ್ಪಟ್ಟ ಬಂಡವಾಳ ಹೂಡಿಕೆ ಪ್ರಸ್ತಾವನೆಗಳಿಗೆ ರಾಜ್ಯ ಉನ್ನತ ಮಟ್ಟದ ಒಪ್ಪಿಗೆ ನೀಡಿಕೆ ಸಮಿತಿ ಸಭೆಯಲ್ಲಿ ಅನುಮೋದನೆಯನ್ನು ನೀಡಲಾಗುವುದು.<br><br>ಬಂಡವಾಳ ಹೂಡಿಕೆದಾರರು ಬಂಡವಾಳ ಹೂಡಿಕೆ ಪ್ರಸ್ತಾವನೆಗಳನ್ನು ebiz.karnataka.gov.in ತಂತ್ರಾಂಶದ ಮೂಲಕ ಅರ್ಜಿ ಸಲ್ಲಿಸಬೇಕು. ತಂತ್ರಾಂಶದಲ್ಲಿ ಬಂಡವಾಳ ಹೂಡಿಕೆ ಪ್ರಸ್ತಾವನೆ ಸ್ವೀಕೃತಿಯ ನಂತರ ಎಲ್ಲಾ ಪ್ರಕ್ರಿಯೆ ಆನ್‌ಲೈನ್ ಮೂಲಕವೇ ನಡೆಯುತ್ತದೆ.<br><br>ಸರ್ಕಾರದ ಆದೇಶ ಸಂಖ್ಯೆ: ಸಿಐ 298 ಎಸ್ ಪಿ ಐ 2021, ಬೆಂಗಳೂರು, ದಿನಾಂಕ 02.09.2022 ರನ್ವಯ ರಾಜ್ಯದಲ್ಲಿ 10 ಎಕರೆವರೆಗಿನ ಜಮೀನು ಮಂಜೂರಾತಿ ಕೋರಿ ಸಲ್ಲಿಸುವ ಬಂಡವಾಳ ಹೂಡಿಕೆ ಪ್ರಸ್ತಾವನೆಗಳನ್ನು ನೇರವಾಗಿ ಸಂಬಂಧಪಟ್ಟ ಏಕಗವಾಕ್ಷಿ, ಅನುಮೋದನಾ ಸಮಿತಿ (SLSWCC/SHLCC) ಮುಂದೆ ಮಂಡಿಸಲಾಗುತ್ತದೆ. |

| | | |
|---|---|---|
| | | ಅಲ್ಲದೇ, 10 ಎಕರೆಗಿಂತ ಹೆಚ್ಚಿನ ಜಮೀನು ಮಂಜೂರಾತಿಗೆ Land Audit Committee ಮುಂದೆ ಪ್ರಸ್ತಾವನೆ ಮಂಡಿಸಿ, ಅದರ ಶಿಫಾರಸ್ಸಿನ ಅನ್ವಯ ಬಂಡವಾಳ ಹೂಡಿಕೆ ಅನುಸಾರ ಸಂಬಂಧಿಸಿದ SLSWCC/SHLCC ಸಭೆಯ ಮುಂದೆ ಮಂಡಿಸಲಾಗುವುದು. |
| ಆ | ಕೈಗಾರಿಕಾ ಉದ್ದೇಶಕ್ಕಾಗಿ ಪಡೆದುಕೊಂಡ ಭೂಮಿಯನ್ನು ನಂತರ ಅನ್ಯ ಉದ್ದೇಶಗಳಿಗೆ ಬಳಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಕೈಗಾರಿಕಾ ಉದ್ದೇಶಕ್ಕಾಗಿ ಪಡೆದುಕೊಂಡ ಭೂಮಿಯನ್ನು, ಸಂಬಂಧಪಟ್ಟ ಯೋಜನೆ ಅನುಷ್ಠಾನಗೊಳಿಸಿ ಶುದ್ಧ ಕ್ರಯಪತ್ರ ಪಡೆದನಂತರ, ಕೈಗಾರಿಕಾ ಉದ್ದೇಶಕ್ಕಾಗಿಯೇ ಭೂಮಿಯನ್ನು ಬಳಸಬೇಕೆಂದು ಕ್ರಯಪತ್ರದಲ್ಲಿ ಕೆ.ಐ.ಎ.ಡಿ.ಬಿ.ಯು ಷರತ್ತು ವಿಧಿಸುತ್ತದೆ.<br><br>ಅಲ್ಲದೇ, ಶುದ್ಧ ಕ್ರಯ ಪಡೆದನಂತರ ಅನ್ಯ ಉದ್ದೇಶಗಳಿಗೆ ಬಳಸಿಕೊಳ್ಳಲು ಇಚ್ಛಿಸಿದ್ದಲ್ಲಿ ಏಕಗವಾಕ್ಷಿ ಸಮಿತಿ ಸಭೆಯಲ್ಲಿ ಅನುಮೋದನೆ ಪಡೆದುಕೊಳ್ಳುವುದು ಕಡ್ಡಾಯವಾಗಿದೆ. |
| ಇ | ಕೈಗಾರಿಕೆಗಳ ಸ್ಥಾಪನೆ ಕುರಿತಂತೆ ಅನುಮತಿ ಸರಳೀಕರಣಗೊಳಿಸುವ ಉದ್ದೇಶ ಸರ್ಕಾರಕ್ಕಿದೆಯೇ? (ಹಾಗಿದ್ದಲ್ಲಿ, ವಿವರ ನೀಡುವುದು) | ರಾಜ್ಯದಲ್ಲಿ ಕೈಗಾರಿಕೆಗಳ ಸ್ಥಾಪನೆಗೆ ಸರ್ಕಾರವು ಕೆಳಕಂಡ ಆದ್ಯತಾ ಕ್ರಮಗಳನ್ನು ಕೈಗೊಳ್ಳಲಾಗಿದೆ.<br>• ಕೈಗಾರಿಕೆಗಳನ್ನು ಪ್ರಾರಂಭಿಸಲು ಬೇಕಾಗಿರುವ ಭೂಮಿ ಖರೀದಿ ಪ್ರಕ್ರಿಯೆ ಸರಳೀಕರಣಗೊಳಿಸಲಾಗಿದೆ.<br>• ಕೈಗಾರಿಕೆಗಳನ್ನು ಪ್ರಾರಂಭಿಸಲು ಬೇಕಾಗಿರುವ ಕೆಲವು ಮುಖ್ಯ ಎನ್.ಒ.ಸಿ ಗಳನ್ನು ಪಡೆಯಲು 3 ವರ್ಷಗಳ ವರೆಗೆ ಸಮಯವನ್ನು ವಿಸ್ತರಿಸಿ ಕರ್ನಾಟಕ ಕೈಗಾರಿಕೆಗಳ (ಸೌಲಭ್ಯ) ಅಧಿನಿಯಮ 2002ಕ್ಕೆ ತಿದ್ದುಪಡಿತರಲಾಗಿದೆ.<br>• ಕೈಗಾರಿಕೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಕಾರ್ಮಿಕರಿಗೆ ಕಾರ್ಮಿಕ ಕಾನೂನನ್ನು ಸರಳೀಕರಣಗೊಳಿಸಲಾಗಿದೆ. |

**ಸಿಐ 141 ಎಸ್‌ಪಿಐ 2023**

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು